321(604) ಶ್ರೀ ರಾಜೇಂದ್ರನ್ ಎಸ್.(ಕೆ.ಜಿ.ಎಫ್.) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೆ.ಜಿ.ಎಫ್. ನಗರದಲ್ಲಿ ಟ್ರಾಫಿಕ್ ಪೊಲೀಸ್ ಠಾಣೆಯನ್ನು ಇದುವರೆಗೂ ತೆರೆಯದಿರುವುದರಿಂದ ಟ್ರಾಫಿಕ್ ಅನ್ನು ನಿಯಂತ್ರಿಸಲು ತೊಂದರೆ ಆಗುತ್ತಿರುವುದು ಸರ್ಕಾರಕ್ಕೆ ಗೊತ್ತಿದೆಯೇ ?

ಆ) ಹಾಗಿದ್ದಲ್ಲಿ, ಠಾಣೆಯನ್ನು ಯಾವಾಗ ತೆಗೆಯಲಾಗುವುದು?

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು):

ಅ) ಸರ್ಕಾರದ ಗಮನಕ್ಕೆ ಇದುವರೆಗೆ ಬಂದಿರುವುದಿಲ್ಲ.

ಆ) ಪ್ರಸ್ತಾವನೆ ಬಂದಾಗ ಪರಿಶೀಲಿಸಿ ನಿರ್ಧಾರ ತೆಗೆದುಕೊಳ್ಳಲಾಗುವುದು.

322(605) ಶ್ರೀ ರಾಜೇಂದ್ರನ್ ಎಸ್. (ಕೆ.ಜಿ.ಎಫ್.) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೆ.ಜಿ.ಎಫ್. ನಲ್ಲಿ ನಗರದ ಜನತೆಗೆ ವಿದ್ಯುತ್ ಚಿತಾಗಾರವಿಲ್ಲದೆ ಸಾವಿಗೀಡಾದ ವ್ಯಕ್ತಿಗಳ ಅಂತ್ಯಕ್ರಿಯೆಗಳಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೆ ;

ಆ) ಹಾಗಿದ್ದಲ್ಲಿ, ಇದನ್ನು ಯಾವಾಗ ನಿರ್ಮಿಸಲಾಗುವುದು ?

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ತೊಂದರೆಯಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.